# ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ

ವಿದ್ಯಾಸಂಗಮ, ರಾಷ್ಟ್ರೀಯ ಹೆದ್ದಾರಿ – 04, ಭೂತರಾಮನಹಟ್ಟಿ, ಬೆಳಗಾವಿ -591156

(ನ್ಯಾಕ್‌ಮಾನ್ಯತೆ ಬಿ+ ಗ್ರೇಡ್-2021) ಪಿಎಂ-ಉಷಾ (ಮೇರು)

(ಹಿಂದಿನ ಪದನಾಮ – 'ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ')

# KITTURU RANI CHANNAMMA UNIVERSITY

Vidyasangama, National Highway – 04, Bhootaramanahatti, Belagavi – 591156

(NAAC Accredited with B+ Grade – 2021) PM-UShA (MERU)

*(Formerly known as 'Rani Channamma University, Belagavi')*

E-mail:registrar@rcub.ac.in

ಕುಲಸಚಿವರ ಕಾರ್ಯಾಲಯ

Office of the Registrar

Website: www.rcub.ac.in

Phone No.: 0831-2565234

ಕ್ರ.ಸಂ.: ಕಿರಾಚವಿ/ಬೆಳಗಾವಿ/ಕುಸಕಾ/ವಿ.ಮಂ.ವಿ/ಸ್ನಾತಕ /2026-27/E.O:156743/ 2877 ದಿನಾಂಕ: 27 AUG 2026

## ಸುತ್ತೋಲೆ

**ವಿಷಯ:** 2026-27 ನೇ ಶೈಕ್ಷಣಿಕ ಸಾಲಿನ ಸ್ನಾತಕ ಕೋರ್ಸಗಳ ಪ್ರಥಮ, ತೃತೀಯ ಹಾಗೂ ಐದನೇ ಸೆಮಿಸ್ಟರ್‌ಗಳ ವಿದ್ಯಾರ್ಥಿಗಳ Course Registration ಮಾಡಿಕೊಳ್ಳುವ ಕುರಿತು.

**ಉಲ್ಲೇಖ:** ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:24/08/2026

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಸಂಯೋಜಿತ ಸ್ನಾತಕ ಪದವಿ ಮಹಾವಿದ್ಯಾಲಯಗಳ ಪ್ರಾಚಾರ್ಯರಿಗೆ ಈ ಮೂಲಕ ತಿಳಿಸುವುದೇನೆಂದರೆ, 2026-27 ನೇ ಶೈಕ್ಷಣಿಕ ಸಾಲಿನ ಸ್ನಾತಕ ಕೋರ್ಸಗಳ ಪ್ರಥಮ, ತೃತೀಯ ಹಾಗೂ ಐದನೇ ಸೆಮಿಸ್ಟರ್‌ಗಳಿಗೆ ಪ್ರವೇಶಾತಿಯನ್ನು ಪಡೆದ ವಿದ್ಯಾರ್ಥಿಗಳು Course Registration ಅನ್ನು ಮಾಡಿಕೊಳ್ಳಲು ದಿನಾಂಕ:28.08.2026 ರಿಂದ 12.09.2026 ರ ವರೆಗೆ ನಿಗದಿಪಡಿಸಲಾಗಿದೆ.

ಮುಂದುವರೆದು, ವಿಷಯಗಳ ಆಯ್ಕೆ ಮಾಡಿಕೊಳ್ಳುವಾಗ ವಿದ್ಯಾರ್ಥಿಗಳು ವಿಷಯಗಳನ್ನು ತಪ್ಪಾಗಿ ಆಯ್ಕೆ ಮಾಡಿಕೊಂಡು ಪ್ರಾಚಾರ್ಯರು ತಮ್ಮ ಲಾಗಿನ್‌ದಿಂದ ತಪ್ಪಾಗಿ ಅನುಮೋದನೆ ನೀಡಿದರೆ ವಿದ್ಯಾರ್ಥಿಗಳಿಂದ ಹಾಗೂ ಮಹಾವಿದ್ಯಾಲಯಗಳಿಂದ ವಿಶ್ವವಿದ್ಯಾಲಯದ ನಿಯಮಾನುಸಾರ ದಂಡ ಶುಲ್ಕವನ್ನು ವಿಶ್ವವಿದ್ಯಾಲಯಕ್ಕೆ ಭರಿಸಿ ಪರೀಕ್ಷಾ ಅರ್ಜಿಗಳನ್ನು ತುಂಬುವ ಮೊದಲು ಮಹಾವಿದ್ಯಾಲಯದವರು ಖುದ್ದಾಗಿ ವಿಶ್ವವಿದ್ಯಾಲಯಕ್ಕೆ ಬಂದು ತಿದ್ದುಪಡಿ ಮಾಡಿಕೊಳ್ಳತಕ್ಕದ್ದು. ತಿದ್ದುಪಡಿ ಮಾಡಿಕೊಳ್ಳದೇ ಇದ್ದಲ್ಲಿ ಮುಂದಿನ ಪರೀಕ್ಷಾ ಫಲಿತಾಂಶದಲ್ಲಿ ಏನಾದರೂ ತೊಂದರೆಯಾದರೆ ಆಯಾ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳೇ ಜವಾಬ್ದಾರರಾಗಿರುತ್ತಾರೆ ಎಂದು ಈ ಮೂಲಕ ತಿಳಿಸಲಾಗಿದೆ.

**ಸೂಚನೆಗಳು:**

1. ತೃತೀಯ ಸೆಮಿಸ್ಟರ್ ವಿದ್ಯಾರ್ಥಿಗಳು ತಾವು ಅಧ್ಯಯನ ಮಾಡುತ್ತಿರುವ **Course/Combination** ನಲ್ಲಿ ಒಂದು **Elective** ವಿಷಯವನ್ನು ಆಯ್ಕೆ ಮಾಡಿಕೊಳ್ಳಬೇಕಾಗಿರತ್ತದೆ.
2. ಪ್ರಥಮ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ 2026-27 ಶೈಕ್ಷಣಿಕ ಸಾಲಿನಿಂದ Employability Skill ಎಂಬ ವಿಷಯವು ಕಡ್ಡಾಯವಾಗಿರುವುದರಿಂದ ಮಹಾವಿದ್ಯಾಲಯದವರು ಪ್ರಥಮ ಸೆಮಿಸ್ಟರ್‌ನ Curriculum ಸೆಟ್ ಮಾಡಿದ ನಂತರ Course Registration ಮಾಡಿಕೊಳ್ಳಲು ತಿಳಿಸುವುದು.

ಮುಂದುವರೆದಿದೆ...

3. 2026-27 ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಸೆಮಿಸ್ಟರ್‌ಗೆ ಪ್ರವೇಶ ಪಡೆದ ವಿದ್ಯಾರ್ಥಿಗಳು RCU-SEP-UG-2024 Seheme ಆಯ್ಕೆ ಮಾಡಿಕೊಂಡು Course Registration ಮಾಡಿಕೊಳ್ಳುವುದು.

**ಉಪಕುಲಸಚಿವರು**

ಉಪಕುಲಸಚಿವರು
ರಾಣಿ ಚನ್ನಮ್ಮ ವಿಶ್ವವಿದ್ಯಾಲಯ
ಬೆಳಗಾವಿ

**ಇವರಿಗೆ,**

1. ಪ್ರಾಚಾರ್ಯರು, ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯ, ಬೆಳಗಾವಿ.
2. ಪ್ರಾಚಾರ್ಯರು, ಬೆಳಗಾವಿ ಮತ್ತು ವಿಜಯಪುರ ಜಿಲ್ಲೆಗಳಲ್ಲಿನ ಸಂಯೋಜಿತ ಸ್ನಾತಕ ಮಹಾವಿದ್ಯಾಲಯಗಳು.

**ಪ್ರತಿ**

1. ಕುಲಸಚಿವರು, (ಮೌಲ್ಯಮಾಪನ) ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
2. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
3. ನೋಡಲ್ ಅಧಿಕಾರಿಗಳು, ಯುಯುಸಿಎಂಎಸ್, ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
4. ಸಂಯೋಜಕರು, ಇ-ವಿದ್ಯಾ ವಿಭಾಗ ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
5. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ಕಿತ್ತೂರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.